**<u>ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ</u>**

# ಸಿ.ಸಿ.ನಂ.696/2018

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಕೆ.ಎಂ.ಮಲಿಯಪ್ಪ | ಸಿ.ಡಬ್ಲ್ಯೂ-2 |
| ತಂದೆಯ ಹೆಸರು | : | ಲೇ.ಮಾದಯ್ಯ | ಪಿ.ಡಬ್ಲ್ಯೂ-3 |
| ವಯಸ್ಸು | : | 49 ವರ್ಷ | - |
| ಉದ್ಯೋಗ | : | ಮುಖ್ಯ ಪೇದೆ, ಅಂತರಸಂತೆ ಪೊಲೀಸ್ ಠಾಣೆ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ **14.03.2024.** |
| ವಾಸಸ್ಥಳ | : | ಹೆಚ್.ಡಿ.ಕೋಟೆ | - |

**<u>ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ</u>**

ನಾನು ಸರಗೂರು ಪೊಲೀಸ್ ಠಾಣೆಯಲ್ಲಿ ದಿಃ 06.03.2017 ರಿಂದ ದಿಃ 20.07.2019 ರವರೆಗೆ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 23.11.2017 ರಂದು ನಾನು ಮತ್ತು ಚಾಸಾ-1 ರವರು ಸರಗೂರು ಠಾಣಾ ವ್ಯಾಪ್ತಿಯ ಬಿ.ಮಟಕೆರೆ ಸರ್ಕಲ್ ಬಳಿ ಗಸ್ತು ಮಾಡುತ್ತಿದ್ದಾಗ ಒಬ್ಬ ಆಸಾಮಿಯು ಕೈಯ್ಯಲ್ಲಿ ಒಂದು ಚೀಲವನ್ನು ಹಿಡಿದುಕೊಂಡು ಹೋಗುತ್ತಿದ್ದು, ನಮ್ಮನ್ನು ನೋಡಿ ಓಡಿ ಹೋಗಲು ಪ್ರಯತ್ನ ಮಾಡಿದಾಗ ನಾನು ಮತ್ತು ಚಾಸಾ-1 ರವರು ಆತನನ್ನು ಸುತ್ತುವರಿದು ಹಿಡಿದು ಹೆಸರು ವಿಳಾಸ ಕೇಳಲಾಗಿ ಸುಂದ್ರ ಬಿನ್ ಲೇ.ನಾಗಪ್ಪ , ಮಟಕೆರೆ ಗ್ರಾಮ ಎಂದು ತಿಳಿಸಿರುತ್ತಾರೆ. ಆತನ ಕೈಯ್ಯಲ್ಲಿದ್ದ ಚೀಲವನ್ನು ಪರಿಶೀಲಿಸಲಾಗಿ 90 ಎಂ.ಎಲ್ ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 38 ಪೌಚುಗಳು ಇದ್ದವು, ರಾಸಾಯನಿಕ ಪರೀಕ್ಷೆಗೆ ಕಳುಹಿಸಿ ಉಳಿದ 8 ಪೌಚುಗಳು ಮತ್ತು ಒಂದು ಪ್ಲಾಸ್ಟಿಕ್ ಚೀಲವನ್ನು ನ್ಯಾಯಾಲಯದ ಅನುಮತಿ ಪಡೆದು ಅಬಕಾರಿ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ. ಸದರಿ ಮದ್ಯದ ಪ್ಯಾಕೆಟುಗಳನ್ನು ಸಾಗಾಟ ಮಾಡಲು ಪರವಾಗಿ ಇದೆಯ ಎಂದು ಕೇಳಲಾಗಿ ಇಲ್ಲ ಎಂದು ತಿಳಿಸಿರುತ್ತಾರೆ. ಆ ವ್ಯಕ್ತಿಯನ್ನು ಸದರಿ ಮದ್ಯದ ಪ್ಯಾಕೆಟುಗಳನ್ನು ಎಲ್ಲಿಂದ ತಂದಿದ್ದೀರಿ ಎಂದು ಕೇಳಿದಾಗ ಬಿದರಹಳ್ಳಿ ಸರ್ಕಲ್ ನಲ್ಲಿರುವ ಶ್ರೀನಿವಾಸ ವೈನ್ಸ್ ಸ್ಟೋರ್ ನಿಂದ ತಂದಿರುತ್ತೇನೆ ಎಂದು ಹೇಳಿರುತ್ತಾರೆ. ಸದರಿ ವ್ಯಕ್ತಿಯನ್ನು ಹಾಗೂ ಮಾಲುಗಳನ್ನು ವಶಕ್ಕೆ ಪಡೆದು ಠಾಣೆಗೆ ಬಂದು ಮುಂದಿನ ಕಾನೂನು ಕ್ರಮಕ್ಕಾಗಿ ವರದಿಯನ್ನು ಚಾಸಾ-1 ರವರು ನೀಡಿರುತ್ತಾರೆ .

ಅದೇ ದಿನ ಠಾಣೆಯಲ್ಲಿ ಚಾಸಾ-3 ಮಲ್ಲಿಕಾರ್ಜುನ ಮತ್ತು ಚಾಸಾ-4 ಬಸವಣ್ಣರವರ ಸಮಕ್ಷಮ ಮಧ್ಯಾಹ್ನ 2.45 ರಿಂದ 3.45 ರವರೆಗೆ ಸರಗೂರು ಪೊಲೀಸ್ ಠಾಣೆಯಲ್ಲಿ ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿದ್ದು ಆರ್.ಎಫ್.ಎಸ್.ಎಲ್ ಗೆ ಕಳುಹಿಸುವ ಸಲುವಾಗಿ 30 ಪೌಚುಗಳನ್ನು ಪ್ರತ್ಯೇಕವಾಗಿ ತೆಗೆದು ಬಿಳಿ ಬಟ್ಟೆಯಿಂದ ಸುತ್ತಿ ಎ ಎಂಬ ಅಕ್ಷರದಿಂದ ಸೀಲ್ ಮಾಡಿ ಅಮಾನತ್ತುಪಡಿಸಿಕೊಂಡಿರುತ್ತೇವೆ.

ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಸಂಜೆ 4.00 ರಿಂದ 4.45 ರವರೆಗೆ ಚಾಸಾ-1 ರವರು ಸ್ಥಳವನ್ನು ತೋರಿಸಿದ ಮೇರೆಗೆ ಪ್ರಕರಣದ ತನಿಖಾಧಿಕಾರಿಗಳು ಚಾಸಾ-1 ಮತ್ತು ಪಂಚರಾದ ಚಾಸಾ-5 ಮತ್ತು 6 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮವನ್ನು ಜರುಗಿಸಿರುತ್ತಾರೆ.

ರಾಸಾಯನಿಕ ಪರೀಕ್ಷೆಯ ವರದಿ ಬಂದ ನಂತರ 30 ಖಾಲಿ ಸಾರಾಯಿ ಪೌಚುಗಳನ್ನು ನ್ಯಾಯಾಲಯದ ಮುಂದೆ ಹಾಜರು ಮಾಡಿದ್ದು ಅವುಗಳನ್ನು ಸಾಕ್ಷಿಯು ನೋಡಿ ಗುರುತಿಸುತ್ತಾರೆ. ಅವುಗಳನ್ನು ಈಗಾಗಲೆ

**ಮು.ಮ.1** ರಿಂದ **ಮು.ಮ.30** ಎಂದು ಗುರುತಿಸಲಾಗಿದೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. 1 ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. 2 ನೇ ಆರೋಪಿ ನ್ಯಾಯಾಲಯದ ಮುಂದೆ ಹಾಜರಿದ್ದು ಸಾಕ್ಷಿಯು ನೋಡಿ ಗುರುತಿಸುತ್ತಾರೆ. 1 ನೇ ಆರೋಪಿಯು ಗೈರು ಹಾಜರಿದ್ದು ಅವರ ಗುರುತಿಸುವಿಕೆಗೆ ತಕರಾರು ಇಲ್ಲ ಎಂದು ಆರೋಪಿತರ ಪರ ವಕೀಲರು ಇಪಿ ಸಲ್ಲಿಸಿರುತ್ತಾರೆ.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎನ್.ಆರ್ ವಕೀಲರಿಂದಃ**

ಘಟನೆ ನಡೆಯಿತು ಎಂದು ಹೇಳಿದ ದಿನ ತಮ್ಮ ಠಾಣೆಯನ್ನು ಗಸ್ತು ಕರ್ತವ್ಯಕ್ಕೆ ಹೋಗಲು ಎಷ್ಟು ಗಂಟೆಗೆ ಬಿಟ್ಟಿರುತ್ತೀರಿ ಎಂದು ಕೇಳಲಾಗಿ ಸಾಕ್ಷಿಯು ಮಧ್ಯಾಹ್ನ 1.00 ಗಂಟೆಗೆ ಬಿಟ್ಟಿರುತ್ತೇವೆ ಎಂದು ನುಡಿಯುತ್ತಾರೆ. ಬಿ.ಮಟಕೆರೆ ಸರ್ಕಲ್ ಜನಸಂದಣಿ ಇರುವ ಸ್ಥಳ ಎಂದರೆ ಸರಿ. ಮಧ್ಯಾಹ್ನದ ಹೊತ್ತಿಗೆ ಸದರಿ ವೃತ್ತದಲ್ಲಿ ಸಾಕಷ್ಟು ಜನ ಇರುತ್ತಾರೆ ಎಂದರೆ ಸಾಕ್ಷಿಯು ಇರಲಿಲ್ಲ ಎಂದು ನುಡಿಯುತ್ತಾರೆ. ಸದರಿ ವೃತ್ತದ ಸುತ್ತ ಮುತ್ತ ಮನೆಗಳು ಇರುತ್ತವೆ ಎಂದರೆ ಸಾಕ್ಷಿಯು ಸ್ವಲ್ಪ ದೂರದಲ್ಲಿ ಇರುತ್ತವೆ ಎಂದು ನುಡಿಯುತ್ತಾರೆ.

ತಮ್ಮ ಹೇಳಿಕೆಯಲ್ಲಿ ಒಬ್ಬ ಆಸಾಮಿ ಪ್ಲಾಸ್ಟಿಕ್ ಚೀಲವನ್ನು ಹಿಡಿದುಕೊಂಡು ನಡೆದುಕೊಂಡು ಬರುತ್ತಿದ್ದ ಎಂದು ಹೇಳಿದ್ದು ಯಾವ ಬಣ್ಣದ ಪ್ಲಾಸ್ಟಿಕ್ ಚೀಲ ಎಂದರೆ ಸಾಕ್ಷಿಯು ಬಣ್ಣ ನನಗೆ ಈಗ ನೆನಪಿಲ್ಲ ಎಂದು ನುಡಿಯುತ್ತಾರೆ. ಸದರಿ ಚೀಲವನ್ನು ಜಪ್ತು ಮಾಡಿ ನ್ಯಾಯಾಲಯಕ್ಕೆ ಹಾಜರು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ . ಆರೋಪಿಯನ್ನು ಓಡಿ ಹಿಡಿದು ದಸ್ತಗಿರಿ ಮಾಡಿ ಮಾಲು ಸಮೇತ ಠಾಣೆಗೆ ಕರೆತಂದಿರುತ್ತೇವೆ ಎಂದು ತಾವು ಹೇಳಿದ್ದು ಆ ಸಮಯಕ್ಕೆ ಮಾಲುಗಳ ಸಮೇತ ಫೋಟೋ ತೆಗೆದಿರುತ್ತೀರಾ ಎಂದರೆ ಸಾಕ್ಷಿಯು ಇಲ್ಲ ಎನ್ನುತ್ತಾರೆ.

ದಿಃ 23.11.2017 ರಂದು ಬಿ.ಮಟಕೆರೆ ಕಡೆ ಗಸ್ತು ಹೋಗಿಲ್ಲ . ಆರೋಪಿಯನ್ನು ಬಂಧಿಸಿಲ್ಲ ಎಂದರೆ ಸರಿಯಲ್ಲ, ಚಾಸಾ-1 ಠಾಣಾ ಮೇಲಾಧಿಕಾರಿಯಾಗಿದ್ದು ನಮ್ಮ ಠಾಣಾ ಅಂಕಿ ಅಂಶಗಳಿಗಾಗಿ ಸುಳ್ಳು ಪ್ರಕರಣ ದಾಖಲು ಮಾಡಿದ್ದು ಅವರನ್ನು ಅನುಸರಿಸಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಮುದ್ದೆ ಮಾಲುಗಳಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ತನಿಖಾಧಿಕಾರಿಯ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಆರೋಪಿ ಪರ ಶ್ರೀ ಹೆಚ್.ಆರ್.ಹೆಚ್ ವಕೀಲರಿಂದಃ**

1 ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನು 2 ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲಾಗಿ ಅಳವಡಿಸಿಕೊಳ್ಳಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿರುತ್ತದೆ.

**ಮರು ವಿಚಾರಣೆಃ ಇಲ್ಲ**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**